ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಆಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಬಿ. ಮುನಿಯಪ್ಪ ಮುದ್ದಪ್ಪ (ಬೃಹತ್ ನೀರಾವರಿ ರಾಜ್ಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೇ, 1995 ರ ಕರ್ನಾಟಕ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಉಪಾಧ್ಯಕ್ಷರು :- ಪ್ರಸ್ತಾವ ಏನೆಂದರೆ;

"1995 ರ ಕರ್ನಾಟಕ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲ್ಪಟ್ಟಿತು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 1995

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಬಂದರು ಮತ್ತು ಮೀನುಗಾರಿಕೆ ಸಚಿವರು) :- ಮಾನ್ಯ ಉಪಾಧ್ಯಕ್ಷರೇ, ಬೆಂಗಳೂರು ನಗರಾಭಿವೃದ್ಧಿ ಮತ್ತು ವಕ್ಫ್ ಮಂತ್ರಿಗಳ ಪರವಾಗಿ, 1995 ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲ್ಪಟ್ಟಿತು.

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ :- ಮಾನ್ಯ ಉಪಾಧ್ಯಕ್ಷರೇ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಇಂಜಿನಿಯರ್ ಸದಸ್ಯರುಗಳನ್ನು ನೇಮಿಸುವಾಗ ಅಲ್ಲಿ "ಕರ್ನಾಟಕ ಇಂಜಿನಿಯರಿಂಗ್ ಸೇವೆಯಲ್ಲಿ" ಎಂಬ ಪದಗಳ ನಂತರ "ರಾಜ್ಯ ಸರ್ಕಾರಕ್ಕೆ, ಸರ್ಕಾರದ ಒಡೆತನಕ್ಕೆ ಅಥವಾ ನಿಯಂತ್ರಣಕ್ಕೆ ಸೇರಿದ ಯಾವುದೇ ಉದ್ಯಮದಲ್ಲಿ ನೇಮಕಗೊಂಡಿರುವ" ಎನ್ನುವ ಪದಗಳನ್ನು ಸೇರಿಸಲಿಕ್ಕೆ ನಾವು ಈ ಒಂದು ತಿದ್ದುಪಡಿಯನ್ನು ತಂದಿದ್ದೇವೆ. ಆದ್ದರಿಂದ ರಾಜ್ಯ ಸರ್ಕಾರದ ಒಡೆತನಕ್ಕೆ ಅಥವಾ ನಿಯಂತ್ರಣಕ್ಕೆ ಸೇರಿದ ಮುಖ್ಯ ಇಂಜಿನಿಯರ್ ಕೇಡರ್ ಅವರನ್ನು ಈ ಇಂಜಿನಿಯರಿಂಗ್ ಸದಸ್ಯರಾಗಿ ನೇಮಕ ಮಾಡಲಿಕ್ಕೋಸ್ಕರವಾಗಿ ಈ ಒಂದು ತಿದ್ದುಪಡಿಯನ್ನು ತರಲಾಗಿದೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ; "1995 ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು :- "ಖಂಡ ಎರಡು ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ನ್ನು ವಿಧೇಯಕಕ್ಕೆ ಸೇರಿಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು :- ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆ ವಿಧೇಯಕ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಪ್ರಸ್ತಾವದ ಅಂಗೀಕಾರ

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಮಂತ್ರಿ) :- ಮಾನ್ಯ ಅಧ್ಯಕ್ಷರೇ, "1995 ರ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲ್ಪಟ್ಟಿತು.

ಪ್ರಕಟಣೆ

ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ.

ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 118 ರ ಮೇರೆಗೆ ದಿನಾಂಕ 21 ನೇ ಸೆಪ್ಟಂಬರ್ 1995 ರಂದು ಕರ್ನಾಟಕ ವಿಧಾನ ಪರಿಷತ್ತು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೇ ಅನುಮೋದಿಸಿತೆಂದು ತಿಳಿಸುತ್ತೇನೆ.

1. ಕರ್ನಾಟಕ ಧನ ವಿಯೋಗ (ನಂ. 2) ವಿಧೇಯಕ, 1995.
2. ಕರ್ನಾಟಕ ಧನ ವಿಯೋಗ (ನಂ. 3) ವಿಧೇಯಕ, 1995.